## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಿಂದ ಪಡೆದ ಪದವಿಗಳ ಮಾನ್ಯತೆ ಬಗ್ಗೆ.

**ಓದಲಾಗಿದೆ:-** (1) ವಿಶ್ವವಿದ್ಯಾಲಯ ಧನ ಸಹಾಯ ಆಯೋಗವು ಹೊರಡಿಸಿರುವ ಪತ್ರಿಕಾ ಪ್ರಕಟಣೆ ಸಂಖ್ಯೆ:F.No.UGC/DEB 8/KSOU/1/2015, ದಿನಾಂಕ: 16-06-2015.
(2) ಸರ್ಕಾರದ ಪತ್ರ ಸಂಖ್ಯೆ:ಇಡಿ 49 ಯುಓವಿ 2014(ಭಾ), ದಿನಾಂಕ: 03-12-2015.
(3) ಸರ್ಕಾರದ ಆದೇಶ ಸಂಖ್ಯೆ:ಇಡಿ 54 ಯುಓವಿ 2017, ದಿನಾಂಕ: 12-10-2017.

**ಪ್ರಸ್ತಾವನೆ:-**

ಮೇಲೆ ಓದಲಾದ(1)ರ ವಿಶ್ವವಿದ್ಯಾಲಯ ಧನಸಹಾಯ ಆಯೋಗವು ಪತ್ರಿಕಾ ಪ್ರಕಟಣೆಯಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಮಾನ್ಯ ಸರ್ವೋಚ್ಚ ನ್ಯಾಯಾಲಯವು ಯಶ್‌ಪಾಲ್ ಶರ್ಮಾ V/s- ಛತ್ತೀಸ್‌ಗಢ್ ಸರ್ಕಾರ ಪ್ರಕರಣದಲ್ಲಿ ನೀಡಿರುವ ತೀರ್ಪಿನ ವಿರುದ್ಧವಾಗಿ ಕರ್ನಾಟಕ ರಾಜ್ಯದ ಭೌಗೋಳಿಕ ವ್ಯಾಪ್ತಿಯ ಹೊರಗೆ ಮತ್ತು ಸಂಬಂಧಪಟ್ಟ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯದೆ ತಾಂತ್ರಿಕ ಮತ್ತು ವೃತ್ತಿಪರ ಕೋರ್ಸುಗಳನ್ನು ನಡೆಸುತ್ತಿರುವುದರಿಂದ, 2013-14ನೇ ಸಾಲಿನಿಂದ ಅನ್ವಯವಾಗುವಂತೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಮಾನ್ಯತೆಯನ್ನು ಹಿಂಪಡೆದಿರುತ್ತದೆ.

ಮೇಲೆ ಓದಲಾದ (2)ರ ಸರ್ಕಾರದ ಪತ್ರದಲ್ಲಿ ವಿಶ್ವವಿದ್ಯಾಲಯ ಧನ ಸಹಾಯ ಆಯೋಗದಿಂದ (ಯುಜಿಸಿ) ಮಾನ್ಯತೆ ನವೀಕರಣವಾಗುವವರೆಗೆ 2015-16ನೇ ಸಾಲಿಗೆ ಹೊಸ ಕೋರ್ಸುಗಳಿಗೆ ಪ್ರವೇಶ ನೀಡಬಾರದೆಂದು ಹಾಗೂ ಈ ಹಿಂದೆ ವಿಶ್ವವಿದ್ಯಾಲಯ ಧನ ಸಹಾಯ ಆಯೋಗವು (ಯುಜಿಸಿ) ಅನುಮತಿ ನೀಡಿದ ಕೋರ್ಸುಗಳಿಗೆ ಮಾತ್ರ ಪ್ರವೇಶಾತಿ ಮಾಡಿಕೊಂಡಿರುವ ವಿದ್ಯಾರ್ಥಿಗಳಿಗೆ ಅವರ ಶೈಕ್ಷಣಿ ಹಿತದೃಷ್ಟಿಯಿಂದ ಮುಂದಿನ 2ನೇ ಮತ್ತು 3ನೇ ವರ್ಷದ ಪ್ರವೇಶ ಪ್ರಕ್ರಿಯೆಯನ್ನು ಮುಂದುವರೆಸಲು ಅನುಮತಿ ನೀಡಲಾಗಿತ್ತು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಮುಖಾಂತರ ವ್ಯಾಸಂಗ ಮಾಡುತ್ತಿರುವ ಮತ್ತು ಈಗಾಗಲೇ ಪದವಿ ಪಡೆದ ಲಕ್ಷಾಂತರ ವಿದ್ಯಾರ್ಥಿಗಳ ಉನ್ನತ ವ್ಯಾಸಂಗ/ಉದ್ಯೋಗಕ್ಕೆ ತೊಂದರೆ ಉಂಟಾಗಿ, ಮುಂದಿನ ಭವಿಷ್ಯವು ಆತಂಕವಾಗಿರುವುದರಿಂದ ವಿದ್ಯಾರ್ಥಿಗಳು/ಪೋಷಕರು, ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳ ಮುಖಾಂತರ ಹಾಗೂ ಸರ್ಕಾರಕ್ಕೆ ಹಲವಾರು ಮನವಿಗಳನ್ನು ಸಲ್ಲಿಸುತ್ತಾ, ಸದರಿ ವಿಶ್ವವಿದ್ಯಾಲಯದಿಂದ ಪಡೆದ ಪದವಿಗಳನ್ನು ಪರಿಗಣಿಸುವ ಬಗ್ಗೆ ಒತ್ತಾಯಿಸಿರುತ್ತಾರೆ. ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:15-09-2017 ಹಾಗೂ 27-09-2017 ರಂದು ನಡೆದ ಸಭೆಯಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಪಡೆದ ಪದವಿಗಳನ್ನು ಪರಿಗಣಿಸುವ ಕುರಿತಂತೆ ಚರ್ಚಿಸಿ, ತೀರ್ಮಾನಿಸಲಾಗಿತ್ತು.

ಮೇಲೆ ಓದಲಾದ (3)ರ ಸರ್ಕಾರದ ಆದೇಶದಲ್ಲಿ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಸಮಸ್ಯೆಗಳ ಕುರಿತು ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ನೀಡಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ದಿನಾಂಕ:30-11-2017 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ. ಸರ್ಕಾರದ ಆದೇಶದನ್ವಯ ರಚಿಸಿರುವ ಈ ಸಮಿತಿಯನ್ನು ಪ್ರಶ್ನಿಸಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಶಿಕ್ಷಕೇತರ ನೌಕರರ ಸಂಘದವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂ.48379/2017ಅನ್ನು ದಾಖಲಿಸಿರುತ್ತಾರೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಮಿತಿಯು ನೀಡಿರುವ ವರದಿಯ ಕಂಡಿಕೆ:5.2ಅನ್ನು ಅನುಷ್ಠಾನಗೊಳಿಸುವುದರಿಂದ, ಅರ್ಜಿದಾರರಿಗೆ ಯಾವುದೇ ತೊಂದರೆ ಉಂಟಾಗಬಾರದೆಂದು ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:01-02-2018ರ ಮಧ್ಯಂತರ ಆದೇಶದಲ್ಲಿ ತೀರ್ಪು ನೀಡಿರುತ್ತದೆ.

ಮೇಲೆ ತಿಳಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಅಪರ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಚಿಸಿರುವ ತಜ್ಞರ ಸಮಿತಿಯ ವರದಿಯ ಕಂಡಿಕೆ:5.2ರಲ್ಲಿ ನೀಡಿರುವ ಶಿಫಾರಸ್ಸನ್ನು ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರಿ ಆದೇಶ ಸಂಖ್ಯೆ: ಇಡಿ 54 ಯುಓವಿ 2017 (ಭಾಗ-1), ಬೆಂಗಳೂರು, ದಿನಾಂಕ: 05-03-2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ದಿನಾಂಕ: 16-06-2015ರಂದು ವಿಶ್ವವಿದ್ಯಾಲಯ ಧನ ಸಹಾಯ ಆಯೋಗವು (ಯು.ಜಿ.ಸಿ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಮಾನ್ಯತೆಯನ್ನು ರದ್ದುಗೊಳಿಸುವ ಪೂರ್ವದಲ್ಲಿಯೇ ಯು.ಜಿ.ಸಿ. ಮಾನ್ಯತೆ ಹೊಂದಿರುವ ತಾಂತ್ರಿಕೇತರ (Non-technical) ಹಾಗೂ ಕರ್ನಾಟಕ ರಾಜ್ಯದೊಳಗೆ ವ್ಯಾಸಂಗ ಮಾಡಿರುವ ಇನ್-ಹೌಸ್ ಕೋರ್ಸ್‌ಗಳಿಗೆ 2013-14 ಹಾಗೂ 2014-15ನೇ ಶೈಕ್ಷಣಿಕ ವರ್ಷದಲ್ಲಿ ಪ್ರವೇಶಾತಿ ಪಡೆದು ಸ್ನಾತಕ/ಸ್ನಾತಕೋತ್ತರ ಕೋರ್ಸುಗಳಲ್ಲಿ ತೇರ್ಗಡೆಯಾದವರಿಗೆ ಮುಂದಿನ ಶೈಕ್ಷಣಿಕ ವ್ಯಾಸಂಗ/ನೇಮಕಾತಿ ಹಾಗೂ ಮುಂಬಡ್ತಿಗಾಗಿ ಪರಿಗಣಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ 2013ರ ಸಾಲಿನ ಪೂರ್ವದಲ್ಲಿ ಪ್ರವೇಶಾತಿ ಪಡೆದು ಉತ್ತೀರ್ಣರಾಗಿ ಅಂಕಪಟ್ಟಿ/ಪದವಿ ಪ್ರಮಾಣ ಪತ್ರಗಳನ್ನು ಪಡೆಯದೇ ಇರುವ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ/ಅಂಕಪಟ್ಟಿಗಳನ್ನು ವಿತರಿಸಲು ಹಾಗೂ ತಾಂತ್ರಿಕೇತರ ಕೋರ್ಸುಗಳಲ್ಲಿ (non-technical courses) ಹಲವು ಬ್ಯಾಚ್‌ಗಳಲ್ಲಿ ವ್ಯಾಸಂಗ ಮಾಡುತ್ತಿದ್ದ ಹಾಗೂ ಕೋರ್ಸುಗಳನ್ನು ಅಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೂ ಸಹ ವ್ಯಾಸಂಗ ಮುಂದುವರಿಸಲು ಹಾಗೂ ಪದವಿ ಪ್ರಮಾಣ ಪತ್ರಗಳನ್ನು ವಿತರಿಸಲು ಪರಿನಿಯಮಾವಳಿ ಅನ್ವಯ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಅಗತ್ಯ ಕ್ರಮವಹಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ವೀರಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

<u>ಗೆ:</u>

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ - ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 500 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು), ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

<u>ಇವರಿಗೆ:-</u>

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ) (ಇ&ಆರ್‌ಎಸ್-ಎ)/(ಎ&ಇ)
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು, ರಾಜ ಭವನ, ಬೆಂಗಳೂರು.
8. ಕುಲಪತಿಗಳು/ಕುಲಸಚಿವರು/ಹಣಕಾಸು ಅಧಿಕಾರಿಗಳು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು - 570 006.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿ.ಆ.ಸು. ಇಲಾಖೆ (ಸೇವಾ ನಿಯಮಗಳು)
10. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.

11. ಎಲ್ಲಾ ಇಲಾಖಾ ಮುಖ್ಯಸ್ಥರು
12. ಎಲ್ಲಾ ಪ್ರಾದೇಶಿಕ ಆಯುಕ್ತರು.
13. ಎಲ್ಲಾ ಜಿಲ್ಲಾಧಿಕಾರಿಗಳು.
14. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
15. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
16. ಎಲ್ಲಾ ಸಚಿವರ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು.
17. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ - 110 011.
18. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)
19. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ